SCCH – 01
MVC No.8911/2024
PW1

<u>ಸಾಕ್ಷಿಗೆ ದಿನಾಂಕಃ **10.11.2025** ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ</u>

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ Smt.MGR ರವರಿಂದಃ</u>**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು** ನಿ.ಪಿ.**2** ಎಂದು, **ಪಂಚನಾಮೆಯನ್ನು** ನಿ.ಪಿ.**3** ಎಂದು, ವಾಹನ ತಡೆ ಪಂಚನಾಮೆಯನ್ನು ನಿ.ಪಿ.**4** ಎಂದು, ಕೃತ್ಯ ನಡೆದ ಸ್ಥಳದ ನಕ್ಷೆಯನ್ನು ನಿ.ಪಿ.**5** ಎಂದು ಗುರುತಿಸಿದೆ.

3) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್** ಅನ್ನು ನಿ.ಪಿ.**6** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**7** ಎಂದು, ಐಎಂವಿ ವರದಿಯನ್ನು ನಿ.ಪಿ.**8** ಎಂದು, **ಗಾಯದ ಪ್ರಮಾಣ ಪತ್ರವನ್ನು** ನಿ.ಪಿ.**9** ಎಂದು, ಮತ್ತು ಅಂತಿಮ ವರದಿಯನ್ನು

ನಿ.ಪಿ.**10** ಎಂದು ಗುರುತಿಸಿದೆ.

**<u>ಸೂಚನೆಃ</u>** ನಿ.ಪಿ.1 ರಿಂದ ನಿ.ಪಿ.10 ಎಂದು ಗುರುತು ಆಗಿರುವ ದಾಖಲೆಗಳು ಕುದೂರು ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

4) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇದೇ ದಾಖಲೆಯ ಫೋಟೋ ಪ್ರತಿಯನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ಫೋಟೋ ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಯನ್ನು ನಿ.ಪಿ.**11** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

5) **ಡಿಸ್ಚಾರ್ಜ್ ಸಮ್ಮರಿ ಅನ್ನು** ನಿ.ಪಿ.**12** ಎಂದು ಗುರುತಿಸಿದೆ.

6) **4** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**13** ಎಂದು ಗುರುತಿಸಿದೆ.

7) ಆದ ಕಾರಣದಿಂದ ಪ್ರಾರ್ಥನೆಯಂತೆ ನನಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.